Akashvani : Bengaluru
National Bulletin In Kannada
02.09.2025 : 7.35am

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

*******

**<><*<><>*><>**

ಮುಖ್ಯಾಂಶಗಳು

೧. ನವದೆಹಲಿಯಲ್ಲಿಂದು ಸೆಮಿಕಾನ್ ಇಂಡಿಯಾ - ೨೦೨೫ ಸಮ್ಮೇಳನಕ್ಕೆ ಪ್ರಧಾನಿ ನರೇಂದ್ರ ಮೋದಿ ಚಾಲನೆ

೨. ಕರ್ನಾಟಕ ಪ್ರವಾಸದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ; ಇಂದು ಮೈಸೂರು ಅರಮನೆಗೆ ಭೇಟಿ

೩. ಜಾಗತಿಕ ವೇದಿಕೆಯಲ್ಲಿ ಭಾರತದ ರಾಜತಾಂತ್ರಿಕತೆ ಬಲಪಡಿಸಲು ಪ್ರಧಾನಿ ಅವರ ಚೀನಾ ಭೇಟಿ ಮಹತ್ವದ್ದು - ರಕ್ಷಣಾ ಸಚಿವ ರಾಜನಾಥ್ ಸಿಂಗ್

೪. ಸಿಂಗಾಪುರ ಪ್ರಧಾನಿ ಲಾರೆನ್ಸ್ ವಾಂಗ್ ಇಂದಿನಿಂದ ೩ ದಿನಗಳ ಭಾರತ ಪ್ರವಾಸ

೫. ಮುಂದಿನ ವರ್ಷದ ಆಗಸ್ಟ್‌ನಲ್ಲಿ ನವದೆಹಲಿಯಲ್ಲಿ ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್ ಟೂರ್ನಿ ಆಯೋಜಿಸಲು ತೀರ್ಮಾನ

**><><><*><><><**

ಪ್ರಧಾನಿ ನರೇಂದ್ರ ಮೋದಿ ಇಂದು ನವದೆಹಲಿಯ ಯಶೋಭೂಮಿಯಲ್ಲಿ ಸೆಮಿಕಾನ್ ಇಂಡಿಯಾ - ೨೦೨೫ ಸಮ್ಮೇಳನ ಉದ್ಘಾಟಿಸಲಿದ್ದಾರೆ. ಮೂರು ದಿನಗಳ ಸಮ್ಮೇಳನವು ದೇಶದಲ್ಲಿ ದೃಢ, ಸುಸ್ಥಿರ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆಯನ್ನು ಮುನ್ನಡೆಸುವತ್ತ ಗಮನಹರಿಸಲಿದೆ. ಇದು ಸೆಮಿಕಾನ್ ಇಂಡಿಯಾ ಕಾರ್ಯಕ್ರಮದ ಪ್ರಗತಿ, ಉತ್ಪಾದನೆ, ಸಂಶೋಧನೆ, ಅಭಿವೃದ್ಧಿಯಲ್ಲಿನ ನಾವೀನ್ಯತೆಗಳು ಮತ್ತು ಕೃತಕ ಬುದ್ಧಿಮತ್ತೆ, ಹೂಡಿಕೆ ಅವಕಾಶಗಳು, ರಾಜ್ಯ ಮಟ್ಟದ ನೀತಿ ಅನುಷ್ಠಾನ ಇತ್ಯಾದಿಗಳ ಕುರಿತು ಗೋಷ್ಠಿಗಳು ನಡೆಯಲಿವೆ. ಪ್ರಧಾನಿ ಅವರು ನಾಳೆ ಸಿಇಒಗಳ ದುಂಡುಮೇಜಿನ ಸಭೆಯಲ್ಲಿಯೂ ಭಾಗವಹಿಸಲಿದ್ದಾರೆ.

೪೮ ಕ್ಕೂ ಹೆಚ್ಚು ದೇಶಗಳಿಂದ ಎರಡು ಸಾವಿರದ ೫೦೦ ಕ್ಕೂ ಹೆಚ್ಚು ಪ್ರತಿನಿಧಿಗಳು ಸೇರಿದಂತೆ ೨೦ ಸಾವಿರಕ್ಕೂ ಹೆಚ್ಚು ಗಣ್ಯರು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಇದು ಆರು ದೇಶಗಳ ದುಂಡುಮೇಜಿನ ಚರ್ಚೆಗಳು ಮತ್ತು ಕಾರ್ಯಪಡೆಯ ಅಭಿವೃದ್ಧಿ ಮತ್ತು ನವೋದ್ಯಮಗಳಿಗೆ ಮೀಸಲಾದ ಚರ್ಚೆಗಳನ್ನು ಒಳಗೊಂಡಿದೆ. ಈ ಕಾರ್ಯಕ್ರಮ ನವೋದ್ಯಮ ಪರಿಸರ ವ್ಯವಸ್ಥೆಯ ಬೆಳವಣಿಗೆ, ಅಂತರರಾಷ್ಟ್ರೀಯ ಸಹಕಾರ ಮತ್ತು ಭಾರತದ ಸೆಮಿಕಂಡಕ್ಟರ್ ವಲಯದ ಭವಿಷ್ಯದ ಮಾರ್ಗಸೂಚಿ ಕುರಿತು ಚರ್ಚಿಸಲಿದೆ. ಪ್ರಪಂಚದಾದ್ಯಂತ ಆಯೋಜಿಸಲಾದ ಸೆಮಿಕಾನ್ ಸಮ್ಮೇಳನಗಳು, ಸೆಮಿಕಂಡಕ್ಟರ್ ವೇದಿಕೆಯಲ್ಲಿನ ತಾಂತ್ರಿಕ ಪ್ರಗತಿಯನ್ನು ಗರಿಷ್ಠಗೊಳಿಸುವ ಗುರಿಯನ್ನು ಹಾಗೂ ವಿವಿಧ ದೇಶಗಳು ತಮ್ಮ ಸೆಮಿಕಂಡಕ್ಟರ್ ಪರಿಸರ ವ್ಯವಸ್ಥೆಯನ್ನು ಬಲಪಡಿಸುವ ಬಗ್ಗೆ ಗಮನಹರಿಸಲಿದೆ.

><><><*><><><

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕರ್ನಾಟಕ ಪ್ರವಾಸದಲ್ಲಿದ್ದು ನಿನ್ನೆ ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ, ತಾಯಿ ಚಾಮುಂಡೇಶ್ವರಿಯ ದರ್ಶನ ಪಡೆದರು. ರಾಜವಂಶಸ್ಥ ಪ್ರಮೋದಾದೇವಿ ಒಡೆಯರ್ ಅವರ ಆಹ್ವಾನದ ಮೇರೆಗೆ ರಾಷ್ಟ್ರಪತಿಯವರು ಇಂದು ಮೈಸೂರು ಅರಮನೆಗೂ ಭೇಟಿ ನೀಡಲಿದ್ದಾರೆ.

><><><*><><><

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ಬಿಹಾರ ರಾಜ್ಯ ಜೀವಿಕ ನಿಧಿ ಸಖ್ ಸಹಕಾರಿ ಸಂಘ ಲಿಮಿಟೆಡ್‌ಗೆ ಚಾಲನೆ ನೀಡಲಿದ್ದಾರೆ. ಈ ಉಪಕ್ರಮವು ಗ್ರಾಮೀಣ ಮಹಿಳೆಯರಲ್ಲಿ ಉದ್ಯಮಶೀಲತಾ ಅಭಿವೃದ್ಧಿಯನ್ನು ಬಲಪಡಿಸುವ ಮತ್ತು ಸಮುದಾಯ ನೇತೃತ್ವದ ಉದ್ಯಮಗಳ ಬೆಳವಣಿಗೆಯನ್ನು ವೇಗಗೊಳಿಸುವ ನಿರೀಕ್ಷೆಯಿದೆ. ಈ ಸಂದರ್ಭದಲ್ಲಿ, ಪ್ರಧಾನಮಂತ್ರಿಯವರು ಸಂಸ್ಥೆಯ ಬ್ಯಾಂಕ್ ಖಾತೆಗೆ ೧೦೫ ಕೋಟಿ ರೂಪಾಯಿಗಳನ್ನು ವರ್ಗಾಯಿಸಲಿದ್ದಾರೆ. ಈ ವ್ಯವಸ್ಥೆಯು ಸಂಪೂರ್ಣವಾಗಿ ಡಿಜಿಟಲ್ ವೇದಿಕೆಯಲ್ಲಿ ಕಾರ್ಯನಿರ್ವಹಿಸುತ್ತದೆ, ಜೀವಿಕ ದೀದೀಸ್ ಅವರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ವೇಗವಾಗಿ ಮತ್ತು ಹೆಚ್ಚು ಪಾರದರ್ಶಕವಾಗಿ ನಿಧಿ ವರ್ಗಾವಣೆಯಾಗುವುದನ್ನು ಖಚಿತಪಡಿಸುತ್ತದೆ. ಇದನ್ನು ಸುಗಮಗೊಳಿಸಲು, ೧೨ ಸಾವಿರ ಸಮುದಾಯ ಕಾರ್ಯಕರ್ತರಿಗೆ ವಿದ್ಯುನ್ಮಾನ ಸಾಧನಗಳನ್ನು ವಿತರಿಸಲಾಗುತ್ತಿದೆ. ಬಿಹಾರ ರಾಜ್ಯದಾದ್ಯಂತ ಸುಮಾರು ೨೦ ಲಕ್ಷ ಮಹಿಳೆಯರು ಈ ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದ್ದಾರೆ.

ಜೀವಿಕ ನಿಧಿಯನ್ನು ಸ್ಥಾಪಿಸುವ ಉದ್ದೇಶವು ಜೀವಿಕದೊಂದಿಗೆ ಸಂಬಂಧಿಸಿದ ಸಮುದಾಯದ ಸದಸ್ಯರಿಗೆ ಕೈಗೆಟುಕುವ ಬಡ್ಡಿದರದಲ್ಲಿ ಸುಲಭ ಸಾಲ ಸೌಲಭ್ಯ ಒದಗಿಸುವುದಾಗಿದೆ.

><><*><><

ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿ, ಪಂಜಾಬ್‌ನಲ್ಲಿ ಮಳೆ ಮತ್ತು ಪ್ರವಾಹದಿಂದ ಉಂಟಾಗಿರುವ ಪರಿಸ್ಥಿತಿಯ ಬಗ್ಗೆ ಚರ್ಚಿಸಿದರು. ಚೀನಾದಿಂದ ದೆಹಲಿಗೆ ಬಂದಿಳಿದ ತಕ್ಷಣ, ನರೇಂದ್ರ ಮೋದಿ ಅವರು ಪಂಜಾಬ್ ಮುಖ್ಯಮಂತ್ರಿಗೆ ಕರೆ ಮಾಡಿ ರಾಜ್ಯಕ್ಕೆ ಎಲ್ಲಾ ರೀತಿಯ ಸಹಾಯ ಮತ್ತು ಬೆಂಬಲದ ಭರವಸೆ ನೀಡಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

><><*><><

ಪ್ರಧಾನಿ ನರೇಂದ್ರ ಮೋದಿ ಅವರ ಚೀನಾ ಭೇಟಿಯನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘಿಸಿದ್ದಾರೆ. ಜಾಗತಿಕ ವೇದಿಕೆಯಲ್ಲಿ ಭಾರತದ ರಾಜತಾಂತ್ರಿಕ ಮತ್ತು ಕಾರ್ಯತಂತ್ರವನ್ನು ಬಲಪಡಿಸುವಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ ಎಂದು ಹೇಳಿದ್ದಾರೆ. ಪ್ರಧಾನಿಯವರ ಚೀನಾ ಭೇಟಿಯ ಯಶಸ್ಸು ಅವರ ರಾಜತಾಂತ್ರಿಕ ಕೌಶಲ್ಯ ಮತ್ತು ಭೌಗೋಳಿಕ ಬೆಳವಣಿಗೆಗಳ ವಾಸ್ತವ ಸ್ಥಿತಿಗತಿಗಳನ್ನು ಮರುರೂಪಿಸುವ ಮತ್ತು ಮರುಸಮತೋಲನಗೊಳಿಸುವ ಭಾರತದ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ ಎಂದು ರಕ್ಷಣಾ ಸಚಿವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಪ್ರಧಾನಿಯವರ ಭೇಟಿಯು ಶಾಂಘೈ ಸಹಕಾರ ಸಂಸ್ಥೆಯೊಂದಿಗೆ ಭಾರತದ ಸಂಪರ್ಕವನ್ನು ಬಲಪಡಿಸಿದೆ. ಈ ಭೇಟಿಯು ರಾಷ್ಟ್ರಗಳ ಸೌಹಾರ್ದತೆಯ ನಡುವೆ ಭಾರತದ ಸ್ಥಾನವನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ ಎಂದು ಹೇಳಿರುವ ರಾಜನಾಥ್ ಸಿಂಗ್, ಚೀನಾಕ್ಕೆ ಪ್ರಧಾನಿ ಮೋದಿಯವರ ಭೇಟಿ ಅತ್ಯಂತ ಫಲಪ್ರದವಾಗಿದೆ ಎಂದು ಅಭಿನಂದನೆ ಸಲ್ಲಿಸಿದ್ದಾರೆ.

><><*><><

ಸಿಂಗಾಪುರ ಪ್ರಧಾನಿ ಲಾರೆನ್ಸ್ ವಾಂಗ್ ಇಂದು ಸಂಜೆ ಭಾರತಕ್ಕೆ ಮೂರು ದಿನಗಳ ಭೇಟಿಗಾಗಿ ಆಗಮಿಸಲಿದ್ದಾರೆ. ವಾಂಗ್ ಅವರು, ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಭಾರತೀಯ ಕೈಗಾರಿಕೆ ಮತ್ತು ವಾಣಿಜ್ಯ ಪ್ರತಿನಿಧಿಗಳ ಜೊತೆ ಸಂವಾದ ನಡೆಸಲಿದ್ದಾರೆ. ವಾಂಗ್ ಅವರ ಭೇಟಿಯ ಸಮಯದಲ್ಲಿ ಕೌಶಲ್ಯ ಅಭಿವೃದ್ಧಿ, ಹಣಕಾಸು ಮತ್ತು ಡಿಜಿಟಲ್ ತಂತ್ರಜ್ಞಾನ, ನಾಗರಿಕ ವಿಮಾನಯಾನ, ಬಾಹ್ಯಾಕಾಶ ಸಹಯೋಗ, ಸಾಗಣೆ ಕ್ಷೇತ್ರಗಳು ಸೇರಿದಂತೆ ಹಲವಾರು ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆ ಇದೆ. ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ಸಿಂಗಾಪುರದಲ್ಲಿ

ನಡೆದ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ವಾಂಗ್ ಅವರು ದ್ವಿಪಕ್ಷೀಯ ಸಂಬಂಧಗಳನ್ನು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ ವ್ಯಾಪ್ತಿಗೆ ತರಲು ಸಮ್ಮತಿಸಿದ್ದರು. ವಾಂಗ್ ಅವರು ಇದೇ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಸಹ ಭೇಟಿ ಮಾಡಲಿದ್ದಾರೆ. ವಿದೇಶಾಂಗ ಸಚಿವ ಎಸ್ ಜೈಶಂಕರ್ ಮತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರೊಂದಿಗೆ ಚರ್ಚಿಸಲಿದ್ದಾರೆ. ಆಗ್ನೇಯ ಏಷ್ಯಾದಲ್ಲಿ ಸಿಂಗಾಪುರ ಭಾರತದ ಅತಿದೊಡ್ಡ ವ್ಯಾಪಾರ ಪಾಲುದಾರ ದೇಶವಾಗಿದ್ದು, ಕಳೆದ ಹಣಕಾಸು ವರ್ಷದಲ್ಲಿ ಎರಡೂ ದೇಶಗಳು ೩೪.೨೭ ಶತಕೋಟಿ ಡಾಲರ್ ವ್ಯಾಪಾರ ವಹಿವಾಟು ನಡೆಸಿದ್ದವು.

><><><*><><><

ರೈತರ ದೂರುಗಳಿಗೆ ಸಕಾಲಿಕ ಮತ್ತು ಪರಿಣಾಮಕಾರಿ ಪರಿಹಾರವನ್ನು ಖಚಿತಪಡಿಸಿಕೊಳ್ಳಲು, ಅವರ ದೂರುಗಳಿಗಾಗಿ ಒಂದೇ ಮೀಸಲಾದ ಪೋರ್ಟಲ್ ಅನ್ನು ಅಭಿವೃದ್ಧಿಪಡಿಸುವಂತೆ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಸಹಾಯವಾಣಿ ಮತ್ತು ಇತರ ಪೋರ್ಟಲ್‌ಗಳ ಮೂಲಕ ರೈತರಿಂದ ಸ್ವೀಕರಿಸಿದ ದೂರುಗಳಿಗೆ ಪರಿಹಾರ ನೀಡುವ ಕುರಿತಂತೆ ನವದೆಹಲಿಯಲ್ಲಿ ನಿನ್ನೆ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಸಚಿವರು ಈ ವಿಷಯ ತಿಳಿಸಿದರು. ರೈತರ ಸಮಸ್ಯೆಗಳ ಪರಿಹಾರಕ್ಕೆ ವಿಳಂಬ ಧೋರಣೆ ಅನುಸರಿಸಬಾರದು. ಸಂಪೂರ್ಣ ಪಾರದರ್ಶಕತೆ, ವಿಶ್ವಾಸಾರ್ಹತೆ ಮತ್ತು ಸೂಕ್ಷ್ಮತೆಯಿಂದ ಅಧಿಕಾರಿಗಳು ಕೆಲಸ ಮಾಡಿ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಬೇಕು ರೈತರ ದೂರುಗಳ ಸಕಾಲಿಕ ಮತ್ತು ಪರಿಣಾಮಕಾರಿ ಪರಿಹಾರಕ್ಕೆ ಕಾರ್ಯವಿಧಾನವನ್ನು ಖಾತರಿಪಡಿಸಬೇಕು ಎಂದು ಸಚಿವರು ಹೇಳಿದರು. ಸಭೆಯಲ್ಲಿ, ಹಲವು ನಕಲಿ ಅಥವಾ ಕಳಪೆ ಗುಣಮಟ್ಟದ ರಸಗೊಬ್ಬರ, ಬೀಜ ಮತ್ತು ಕೀಟನಾಶಕಗಳಿಗೆ ಸಂಬಂಧಿಸಿದಂತೆ ರೈತರು ದೂರುಗಳನ್ನು ಸಲ್ಲಿಸಿದರು. ವ್ಯಾಪಾರಿಗಳು ಅಧಿಸೂಚಿತ ಉತ್ಪನ್ನಗಳನ್ನು ಮಾತ್ರ ಮಾರಾಟ ಮಾಡಬೇಕು ಎಂದು ಸಚಿವರು ಈ ಸಂದರ್ಭದಲ್ಲಿ ಆದೇಶ ನೀಡಿದರು.

><><><*><><><

ಸ್ವಚ್ಛ ಭಾರತ ಅಭಿಯಾನ ಗ್ರಾಮೀಣ ಮತ್ತು ಜಲ ಜೀವನ್ ಮಿಷನ್ ದೇಶವನ್ನು ಸುಸ್ಥಿರ ನೈರ್ಮಲ್ಯ ಮತ್ತು ನೀರಿನ ಸುರಕ್ಷತೆಯತ್ತ ಕೊಂಡೊಯ್ಯುತ್ತಿವೆ ಎಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಹೇಳಿದ್ದಾರೆ.

ನವದೆಹಲಿಯಲ್ಲಿ ನಿನ್ನೆ ನಡೆದ ಸ್ವಚ್ಛ ಭಾರತ ಗ್ರಾಮೀಣ ಕುರಿತಾದ ದುಂಡುಮೇಜಿನ ಸಮ್ಮೇಳನದಲ್ಲಿ ಅವರು ಮಾತನಾಡಿ, ಜನಾಂದೋಲನದ ಸಾಮೂಹಿಕ ಸಾಧನೆಗಳನ್ನು ಶ್ಲಾಘಿಸಿದರು. ನಾವೀನ್ಯತೆ, ತ್ಯಾಜ್ಯದಿಂದ ಇಂಧನ ಉತ್ಪಾದನೆ ಮತ್ತು ಹವಾಮಾನ-ನಿರೋಧಕ ನೈರ್ಮಲ್ಯದ ಮಹತ್ವದ ಬಗ್ಗೆ ಸಚಿವರು ಒತ್ತಿ ಹೇಳಿದರು.

><><><*><><><

ಮುಂದಿನ ವರ್ಷದ ಆಗಸ್ಟ್‌ನಲ್ಲಿ ನವದೆಹಲಿಯಲ್ಲಿ ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್ ಟೂರ್ನಿಯನ್ನು ಆಯೋಜಿಸಲು ತೀರ್ಮಾನಿಸಲಾಗಿದೆ. ಪ್ಯಾರಿಸ್‌ನಲ್ಲಿ ನಡೆದ ೨೦೨೫ ರ ಚಾಂಪಿಯನ್‌ಶಿಪ್‌ನ ಸಮಾರೋಪ ಸಮಾರಂಭದ ಸಂದರ್ಭದಲ್ಲಿ ವಿಶ್ವ ಬ್ಯಾಡ್ಮಿಂಟನ್ ಒಕ್ಕೂಟ ಈ ಘೋಷಣೆ ಮಾಡಿತು. ೧೭ ವರ್ಷಗಳ ನಂತರ ಭಾರತಕ್ಕೆ ಈ ಮಹತ್ವದ ಕ್ರೀಡಾ ಕೂಟ ಆಯೋಜಿಸಲು ಅವಕಾಶ ದೊರೆತಿದೆ.ಹೈದರಾಬಾದ್ ನಲ್ಲಿ ೨೦೦೯ ರಲ್ಲಿ ವಿಶ್ವ ಚಾಂಪಿಯನ್‌ಶಿಪ್ ಪಂದ್ಯಾವಳಿಯನ್ನು ಆಯೋಜಿಸಲಾಗಿತ್ತು. ಭಾರತಕ್ಕೆ, ಜಾಗತಿಕ ಬ್ಯಾಡ್ಮಿಂಟನ್ ನಕ್ಷೆಯಲ್ಲಿ ಪ್ರಮುಖ ತಾಣವಾಗಿ ತನ್ನ ಸ್ಥಾನವನ್ನು ಮತ್ತಷ್ಟು ಭದ್ರಪಡಿಸಿಕೊಳ್ಳಲು ಈ ಬೆಳವಣಿಗೆ ಸಹಕಾರಿಯಾಗಲಿದೆ.

><><><*><><><

ನಾಗರಿಕ ವಿಮಾನಯಾನ ನಿರ್ದೇಶನಾಲಯ ಮೊದಲ ಬಾರಿಗೆ ಏರ್ ಇಂಡಿಯಾ **SATS** ವಿಮಾನ ನಿಲ್ದಾಣ ಸೇವೆಗಳಿಗೆ ಸುರಕ್ಷತಾ ಅನುಮತಿ ಪತ್ರ ನೀಡಿದೆ. ಇದರೊಂದಿಗೆ, ಏಷ್ಯಾ ಪೆಸಿಫಿಕ್ ಪ್ರದೇಶದಲ್ಲಿ ಮಲೇಷ್ಯಾ ನಂತರ **ICAO** ಮಾರ್ಗದರ್ಶನದೊಂದಿಗೆ ಇಂತಹ ಸಮಗ್ರ ಚೌಕಟ್ಟನ್ನು ಜಾರಿಗೆ ತಂದ ಎರಡನೇ ದೇಶ ಭಾರತವಾಗಿದೆ. ಈ ಕ್ರಮವು ಸುರಕ್ಷತಾ ನಿರ್ವಹಣಾ ವ್ಯವಸ್ಥೆಗಳನ್ನು ಬಲಪಡಿಸುವ ಮತ್ತು ಭಾರತದಾದ್ಯಂತ ನಿರ್ವಹಣಾ ಕಾರ್ಯಾಚರಣೆಗಳಲ್ಲಿ ನಿಯಂತ್ರಕ ಮೇಲ್ವಿಚಾರಣೆಯನ್ನು ಹೆಚ್ಚಿಸುವ ತನ್ನ ಬದ್ಧತೆಯನ್ನು ಬಲಪಡಿಸುತ್ತದೆ ಎಂದು ನಾಗರಿಕ ವಿಮಾನಯಾನ ನಿರ್ದೇಶನಾಲಯ ಹೇಳಿದೆ.

><><><*><><><